**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಯು.ಬಿ.ವೆಂಕಟೇಶ್ ಇವರು ನಿಯಮ-72 ರಡಿ ಮಂಡಿಸಿರುವ ಸೂಚನಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಉತ್ತರ**

*****

**ವಿಷಯ:** ಉಡುಪಿ ಜಿಲ್ಲೆ ಕಾರ್ಕಳ ತಾಲ್ಲೂಕಿನ ಎರ್ಲಪಾಡಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬೈಲೂರು ಉಮಿಕಲ್ ಬೆಟ್ಟದಲ್ಲಿ ನಿರ್ಮಿಸಲಾದ ದೋಷಪೂರಿತ ಪರಶುರಾಮ ವಿಗ್ರಹ ಸ್ಥಾಪನೆಯಲ್ಲಿ ವ್ಯಾಪಕ ಭ್ರಷ್ಟಚಾರ ಕೇಳಿಬಂದ ಹಿನ್ನೆಲೆಯಲ್ಲಿ ಕೆಲವು ಖಾಸಗಿ ವ್ಯಕ್ತಿಗಳು ರಾತ್ರೋರಾತ್ರಿ ಪ್ರತಿಮೆಯ ಅವಶೇಷಗಳನ್ನು ತೆರವುಗೊಳಿಸಿ ಸಮುದ್ರಕ್ಕೆ ಎಸೆದಿರುವ ಪ್ರಕರಣದ ಕುರಿತು ನಿಯಮ-72ರಡಿಯಲ್ಲಿ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯ ಬಯಸುತ್ತೇನೆ.

*****

**ಉತ್ತರ:** ಉಡುಪಿ ಜಿಲ್ಲೆ ಕಾರ್ಕಳ ತಾಲ್ಲೂಕಿನ ಎರ್ಲಪಾಡಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬೈಲೂರು ಉಮಿಕಲ್ ಬೆಟ್ಟದಲ್ಲಿ ಪರಶುರಾಮ ಥೀಂ ಪಾರ್ಕ್ ನಿರ್ಮಾಣ ಕಾಮಗಾರಿಗಳಾದ 61.20 ಮೀ ಉದ್ದ ಮತ್ತು 6.20 ಮೀ ಅಗಲ ರಸ್ತೆಯ ಕಲ್ಲು ಮತ್ತು ಪರಶುರಾಮ ಪುತ್ಥಳೀಯ ತಳಪಾಯದ ಕಾಂಕ್ರೀಟಿಕರಣ ಹಾಗೂ ಪುತ್ಥಳಿಯ ಆಂತರಿಕ ಸ್ಟ್ರಕ್ಚರಲ್ ಫ್ರೇಂ ಕೆಲಸಕ್ಕಾಗಿ ಮಾತ್ರ ರೂ.55.00ಲಕ್ಷಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿರುತ್ತದೆ.

ಮುಂದುವರೆದು, ಪ್ರವಾಸೋದ್ಯಮ ಇಲಾಖೆಯ ಆದೇಶ ಸಂಖ್ಯೆ: ಟಿಓಆರ್ 117 ಟಿಡಿಪಿ 2022, ದಿನಾಂಕ:25.11.2022ರಲ್ಲಿ ಉಡುಪಿ ಜಿಲ್ಲೆ ಕಾರ್ಕಳ ತಾಲ್ಲೂಕಿನ ಎರ್ಲಪಾಡಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬೈಲೂರು ಉಮಿಕಲ್ ಬೆಟ್ಟದಲ್ಲಿ ಪರಶುರಾಮ ಥೀಂ ಪಾರ್ಕ್ ಅಭಿವೃದ್ಧಿ ಹಾಗೂ ಪರಶುರಾಮ ಮೂರ್ತಿಯನ್ನು ಒಳಗೊಂಡ ಕಾಮಗಾರಿಯ ರೂ.500.00ಲಕ್ಷ ಮೊತ್ತದ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಪ್ರಸ್ತುತ ಪರಶುರಾಮ ಥೀಂ ಪಾರ್ಕ್ ಹಾಗೂ ಪರಶುರಾಮ ವಿಗ್ರಹ ಸ್ಥಾಪನೆ ಕಾಮಗಾರಿಯನ್ನು ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಕೈಗೊಳ್ಳಲಾಗಿರುತ್ತದೆ.

ಕಡತ ಸಂಖ್ಯೆ: ಕಸಂವಾ /07/ಕವಿಸ/ 2024

**(ಶಿವರಾಜ.ಎಸ್.ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.